ಸಂತೆ ಮಾಳಗಳ ಅಭಿವೃದ್ಧಿ

183(305) ಶ್ರೀ ಈಶ್ವರ ಭೀಮಣ್ಣ ಖಂಡ್ರೆ:(ಭಾಲ್ಕಿ) ಮಾನ್ಯ ಕೃಷಿ ಮಾರುಕಟ್ಟೆ ಮತ್ತು ಸಕ್ಕರೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿಯ ವತಿಯಿಂದ ಸಂತೆಮಾಳಗಳ ಅಭಿವೃದ್ಧಿಗಾಗಿ ಅಗತ್ಯ ಮೂಲ ಸೌಕರ್ಯಗಳನ್ನು ಒದಗಿಸಲು ಪ್ರಸಕ್ತ ಸಾಲಿನಲ್ಲಿ ಪ್ರತಿಯೊಂದು ತಾಲ್ಲೂಕಿನಲ್ಲಿ ಒಂದು ಕೋಟಿ ರೂಪಾಯಿಗಳನ್ನು ವೆಚ್ಚ ಮಾಡಲಾಗುತ್ತಿದೆಯೇ;

ಆ) ಹಾಗಿದ್ದಲ್ಲಿ, ಬಜೆಟ್‌ನಲ್ಲಿ ಇದಕ್ಕಾಗಿ ನಿಗಧಿಪಡಿಸಿರುವ ಹಣವೆಷ್ಟು;

ಇ) ಈ ಯೋಜನೆಯನ್ನು ಜಾರಿಗೊಳಿಸಲು ಪ್ರಸಕ್ತ ಸಾಲಿನಲ್ಲಿ ಬೀದರ್ ಜಿಲ್ಲೆಯ ಯಾವ್ಯಾವ ತಾಲ್ಲೂಕುಗಳನ್ನು ಆಯ್ಕೆ ಮಾಡಿಕೊಳ್ಳಲಾಗಿದೆ.

ಈ) ಪ್ರಸಕ್ತ ಸಾಲಿನಲ್ಲಿ ಈ ಯೋಜನೆಯನ್ನು ಭಾಲ್ಕಿ ಮತಕ್ಷೇತ್ರದಲ್ಲಿ ಜಾರಿಗೊಳಿಸಲಾಗುವುದೇ

ಉ) ಇಲ್ಲಿಯವರೆಗೆ ಈ ಯೋಜನೆಯ ಅನುಷ್ಠಾನಕ್ಕಾಗಿ ಪ್ರತಿ ಜಿಲ್ಲೆಗೆ ಬಿಡುಗಡೆ ಮಾಡಿರುವ ಹಣವೆಷ್ಟು?

ಶಿವರಾಜ್ ಎಸ್ ತಂಗಡಗಿ(ಕೃಷಿ ಮಾರುಕಟ್ಟೆ ಮತ್ತು ಸಕ್ಕರೆ ಸಚಿವರು):

ಅ) ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿಯ ವತಿಯಿಂದ ಸಂತೆಮಾಳಗಳ ಅಭಿವೃದ್ಧಿಗಾಗಿ ಅಗತ್ಯ ಮೂಲ ಸೌಕರ್ಯ ಒದಗಿಸಲು ಪ್ರತಿಯೊಂದು ತಾಲ್ಲೂಕಿನಲ್ಲಿ ರೂ.1.00 ಕೋಟಿ ವೆಚ್ಚ ಮಾಡಲಾಗುವುದು ಎಂದು 2010–11ನೇ ಆಯವ್ಯಯದ ಭಾಷಣದಲ್ಲಿ ಘೋಷಿಸಲಾಗಿದೆ.

ಆ) ಪ್ರಸಕ್ತ ಸಾಲಿನ ಬಜೆಟ್‌ನಲ್ಲಿ ಇದಕ್ಕಾಗಿ ಹಣವನ್ನು ನಿಗದಿಪಡಿಸಿರುವುದಿಲ್ಲ. ಆದಾಗ್ಯೂ ಸಹ ಸದರಿ ಯೋಜನೆಯನ್ನು ಆರ್.ಐ.ಡಿ.ಎಫ್. ಆರ್.ಕೆ.ಐ.ವೈ. ಹಾಗೂ ಸಮಿತಿಯ ನಿಧಿಯಿಂದ ಅನುಷ್ಠಾನಗೊಳಿಸಲಾಗುವುದು.

ಇ) ಎಲ್ಲ ತಾಲ್ಲೂಕುಗಳಲ್ಲಿ ಸದರಿ ಯೋಜನೆಯನ್ನು ಅನುಷ್ಠಾನಗೊಳಿಸಲು ಕ್ರಮ ತೆಗೆದುಕೊಳ್ಳಲಾಗುವುದು.

ಈ) ಪ್ರಸಕ್ತ ಸಾಲಿನಲ್ಲಿ ಇಲ್ಲಿಯವರೆಗೆ ಭಾಲ್ಕಿ ಮತಕ್ಷೇತ್ರದಲ್ಲಿ ಜಾರಿಗೊಳಿಸಿಲ್ಲ.

ಉ) ಈ ಯೋಜನೆಯಲ್ಲಿ ಯಾವುದೇ ಜಿಲ್ಲೆಗೂ ಹಣ ಬಿಡುಗಡೆಯಾಗಿರುವುದಿಲ್ಲ

ಯಶಸ್ವಿನಿ ಯೋಜನೆ

184(306) ಶ್ರೀ ಈಶ್ವರ ಭೀಮಣ್ಣ ಖಂಡ್ರೆ:(ಭಾಲ್ಕಿ) ಮಾನ್ಯ ಸಹಕಾರ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬೀದರ್ ಜಿಲ್ಲೆಯಲ್ಲಿ ಯಾವ್ಯಾವ ಆಸ್ಪತ್ರೆಗಳನ್ನು ಯಶಸ್ವಿನಿ ಯೋಜನೆಯನ್ನು ಜಾರಿಗೊಳಿಸಲು ಗುರುತಿಸಲಾಗಿದೆ? (ಆಸ್ಪತ್ರೆವಾರು ವಿವರಗಳನ್ನು ಒದಗಿಸುವುದು)

ಆ) ಈ ಪೈಕಿ ಎಷ್ಟು ಆಸ್ಪತ್ರೆಗಳಲ್ಲಿ ಈ ಯೋಜನೆಯ ಅನುಷ್ಠಾನದಲ್ಲಿ ಅವ್ಯವಹಾರಗಳು ಪತ್ತೆಯಾಗಿವೆ, ಇವುಗಳ ಮತ್ತು ಈ ಆಸ್ಪತ್ರೆಗಳ ಮಾಲೀಕರ ವಿವರಗಳೇನು?

ಇ) ಎಷ್ಟು ಆಸ್ಪತ್ರೆಗಳನ್ನು ಯಶಸ್ವಿನಿ ಯೋಜನೆ ಪಟ್ಟಿಯಿಂದ ಕೈ ಬಿಡಲಾಗಿದೆ?

ಶ್ರೀ ಲಕ್ಷ್ಮಣ ಸವದಿ(ಸಹಕಾರ ಸಚಿವರು):

ಅ) ಬೀದರ್ ಜಿಲ್ಲೆಯಲ್ಲಿ 2009–10ನೇ ಸಾಲಿನಲ್ಲಿ ಈ ಕೆಳಗಿನ 12 ಆಸ್ಪತ್ರೆಗಳನ್ನು ಯಶಸ್ವಿನಿ ಯೋಜನೆಯಡಿಯಲ್ಲಿ ನೆಟ್‌ವರ್ಕ್ ಆಸ್ಪತ್ರೆಗಳಾಗಿ ಗುರುತಿಸಲಾಗಿದೆ.–

ಕ್ರ.ಸಂ.	ಆಸ್ಪತ್ರೆಯ ಹೆಸರು
1	ಜಿಲ್ಲಾ ಸರ್ಕಾರಿ ಆಸ್ಪತ್ರೆ ಬೀದರ್
2	ಅಪೆಕ್ಸ್ ಆಸ್ಪತ್ರೆ, ಬೀದರ್
3	ಕಾಮ್‌ತಿಕಾರ ಆಸ್ಪತ್ರೆ, ಬೀದರ್
4	ವಿವೇಕ್ ನರ್ಸಿಂಗ್ ಹೋಂ, ಬೀದರ್
5	ವೆಲೆಮೇಗ್ನಾ ಐ ಕೇರ್ ಅಂಡ್ ಗುಡ್ ನ್ಯೂಸ್ ಸೊಸೈಟಿ, ಬೀದರ್